17

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬುದ್ಧಿಮಾಂದ್ಯ, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆಗೆ ಒಳಗಾದ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದ ಅಂಗವಿಕಲರಿಗೆ ನಿರಾಮಯ ಎಂಬ ಆರೋಗ್ಯ ವಿಮಾ ಯೋಜನೆಯನ್ನು ಜಾರಿಗೆ ತರುವ ಬಗ್ಗೆ.

ಓದಲಾಗಿದೆ: ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಪತ್ರ ಸಂಖ್ಯೆ:ಇಸಿ/19/ ಯೋಜನೆ/2014-15/748, ದಿನಾಂಕ: 19.5.2014.

ಪ್ರಸ್ತಾವನೆ:

2014-15ನೇ ಸಾಲಿನ ಆಯವ್ಯಯದಲ್ಲಿ ಬುದ್ಧಿಮಾಂದ್ಯ, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆಗೆ ಒಳಗಾದ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದ ಅಂಗವಿಕಲರಿಗೆ ನಿರಾಮಯ ಎಂಬ ಆರೋಗ್ಯ ವಿಮಾ ಯೋಜನೆಯನ್ನು ಜಾರಿಗೆ ತರಲು ಘೋಷಿಸಲಾಗಿದೆ. ಕೇಂದ್ರ ಸರ್ಕಾರದ ನ್ಯಾಷನಲ್ ಟ್ರಸ್ಟ್ 1999 ಆಕ್ಟ್ ಅಡಿ ಬರುವ ಆಟಿಸಂ, ಸೆರಬ್ರಲ್ ಪಾಲ್ಸಿ, ಬುದ್ಧಿಮಾಂದ್ಯರು ಮತ್ತು ಬಹುವಿಧ ಅಂಗವಿಕಲತೆ ಹೊಂದಿರುವ 04 ವಿಧದ ವಿಕಲಚೇತನರಿಗೆ "ನಿರಾಮಯ" ಆರೋಗ್ಯ ವಿಮಾ ಯೋಜನೆಯನ್ನು ರಾಜ್ಯದ ನೋಡಲ್ ಏಜೆನ್ಸಿಯಾದ ಸೇವಾ-ಇನ್-ಆಕ್ಷನ್ ಸ್ವಯಂ ಸೇವಾ ಸಂಸ್ಥೆಯ ಮುಖಾಂತರ ಅನುಷ್ಠಾನಗೊಳಿಸುತ್ತಿದ್ದು, ಈ ಯೋಜನೆಯಡಿ ವಾರ್ಷಿಕ ಗರಿಷ್ಠ ರೂ.1.00 ಲಕ್ಷಗಳನ್ನು ನ್ಯಾಷನಲ್ ಟ್ರಸ್ಟ್‌ನವರು ಗುರುತಿಸಿರುವ ಆಸ್ಪತ್ರೆಯಲ್ಲಿ ಚಿಕಿತ್ಸೆಗಾಗಿ ಭರಿಸಿರುವ ವೆಚ್ಚವನ್ನು ಮರು ಪಾವತಿಸಲು ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು ಮೇಲೆ ಓದಲಾದ ದಿನಾಂಕ: 19.5.2014 ರ ಪತ್ರದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಮಮಇ 115 ಪಿಎಚ್‌ಪಿ 2014, ಬೆಂಗಳೂರು, ದಿನಾಂಕ: 21.08.2014.

25/08/14

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಬುದ್ಧಿಮಾಂದ್ಯ, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆಗೆ ಒಳಗಾದ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದ ಅಂಗವಿಕಲರಿಗೆ ನಿರಾಮಯ ಎಂಬ ಆರೋಗ್ಯ ವಿಮಾ ಯೋಜನೆಯನ್ನು ಜಾರಿಗೆ ತರಲು ಆಡಳಿತಾತ್ಮಕ ಅನುಮೋದನೆ ನೀಡಿದೆ.

ಈ ಯೋಜನೆಗೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ 2235-02-101-0-99 ಯೋಜನೆ ಉಪ ಲೆಕ್ಕಶೀರ್ಷಿಕೆ 100 ಧನಸಹಾಯ ಮತ್ತು ಪರಿಹಾರ ಯೋಜನೆಯಡಿ ಒದಗಿಸಿರುವ ರೂ.1.12ಕೋಟಿ(ರೂಪಾಯಿ ಒಂದು ಕೋಟಿ ಹನ್ನೆರಡು ಲಕ್ಷಗಳು) ಅನುದಾನದ ಮಿತಿಯಲ್ಲಿ ಭರಿಸತಕ್ಕದ್ದು.

ಆರೋಗ್ಯ ಇಲಾಖೆಯಲ್ಲಿ ಲಭ್ಯವಿರುವ ಫಲಾನುಭವಿಗಳ ಪಟ್ಟಿಯಲ್ಲಿ ಆಯ್ಕೆ ಮಾಡಿರುವ ಫಲಾನುಭವಿಗಳು ಪುನರಾವರ್ತನೆ ಆಗದಂತೆ ಹೊಂದಾಣಿಕೆ ಮಾಡಿಕೊಂಡು ಈ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

. . . . 2

757
25-8-2014

18



ಈ ಆದೇಶದ ಅನುಬಂಧದಲ್ಲಿ ಲಗತ್ತಿಸಿರುವ ಮಾರ್ಗಸೂಚಿಗಳ ಪ್ರಕಾರ ಯೋಜನೆಯನ್ನು ಅನುಷ್ಠಾನಗೊಳಿಸುವುದು.

ಈ ಆದೇಶವನ್ನು ಕ್ರಮವಾಗಿ ಆರ್ಥಿಕ ಇಲಾಖೆ, ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 464 ವೆಚ್ಚ–3/2014, ದಿನಾಂಕ: 13.6.2014 ಹಾಗೂ ಪಿಡಿ 38 ಐಎಂಎಂ 2014, ದಿನಾಂಕ: 23.7.2014 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಗೋಪಾಲ್) 21/8/14
ಸರ್ಕಾರದ ಉಪ ಕಾರ್ಯದರ್ಶಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಹಾಗೂ ವಿಕಲಚೇತನರ ಮತ್ತು ಹಿರಿಯ
ನಾಗರಿಕರ ಸಬಲೀಕರಣ ಇಲಾಖೆ.

ಇವರಿಗೆ:–

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
4. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
5. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು,ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ–3 & 9).
8. ನಿರ್ದೇಶಕರು, ಯೋಜನಾ ಇಲಾಖೆ (ಪಿ.ಎಂ.ಐ. ವಿಭಾಗ).
9. ಎಲ್ಲಾ ಜಿಲ್ಲೆಯ ಉಪ ನಿರ್ದೇಶಕರು/ ಸಹಾಯಕ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ (ನಿರ್ದೇಶಕರ ಮುಖಾಂತರ).
10. ಎಲ್ಲಾ ಜಿಲ್ಲೆಯ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ (ನಿರ್ದೇಶಕರ ಮುಖಾಂತರ).
11. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 115 ಪಿಎಚ್‌ಪಿ 2014, ದಿನಾಂಕ: 04.08.2014ರ ಆದೇಶಕ್ಕೆ ಮಾರ್ಗಸೂಚಿಗಳು**

1. ವಿಕಲಚೇತನ ವ್ಯಕ್ತಿಗಳು ಭಾರತ ಪ್ರಜೆಯಾಗಿರಬೇಕು. ಹಾಗೂ ಇವರು ಕರ್ನಾಟಕದಲ್ಲಿ ಕನಿಷ್ಠ ಹಿಂದಿನ 10 ವರ್ಷಗಳು ವಾಸವಾಗಿರಬೇಕು.
2. ಕೇಂದ್ರ ಸರ್ಕಾರದ ನ್ಯಾಷನಲ್ ಟ್ರಸ್ಟ್ ಆಕ್ಟ್ ನಡಿ ಬರುವ 04 ವಿವಿಧ ಅಂದರೆ ಬುದ್ದಿಮಾಂದ್ಯ, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿದ ವಿಕಲಚೇತನರು ಮಾತ್ರ ಸೌಲಭ್ಯ ಪಡೆಯಬಹುದಾಗಿದೆ.
3. ಈ ಯೋಜನೆಗೆ ಒಳಪಡುವವರು ಬಡತನ ರೇಖೆಗಿಂತ ಕೆಳಗಿನವರಾಗಿರಬೇಕು ಹಾಗೂ ಬಿ.ಪಿ.ಎಲ್ ಕಾರ್ಡ್ ದೃಢೀಕೃತ ಪ್ರತಿ ಲಗತ್ತಿಸುವುದು. ಬಿ.ಪಿ.ಎಲ್ ಕಾರ್ಡ್ ಇಲ್ಲದ ಫಲಾನುಭವಿಗಳು ಗ್ರಾಮೀಣಪ್ರದೇಶದವರಾಗಿದ್ದಲ್ಲಿ ರೂ.12,000/- ಹಾಗೂ ನಗರ ಪ್ರದೇಶದವರಾಗಿದ್ದಲ್ಲಿ ರೂ.17,000/-ಗಳ ಮಿತಿಯೊಳಗಿರಬೇಕು. ಇತ್ತೀಚಿನ ಆದಾಯ ಪ್ರಮಾಣ ಪತ್ರದ ದೃಢೀಕೃತ ಪ್ರತಿ ಲಗತ್ತಿಸಬೇಕು. ಹಾಗೂ ಫಲಾನುಭವಿಗಳು ಪುನರಾವರ್ತನೆ ಆಗದಂತೆ ಕ್ರಮ ವಹಿಸಬೇಕು.
4. ವಯಸ್ಸಿನ ಮಿತಿ ಇರುವುದಿಲ್ಲ
5. ಯಾವುದೇ ಅರ್ಹ ಫಲಾನುಭವಿಯು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ನೇರವಾಗಿ ಅಥವಾ ನ್ಯಾಷನಲ್ ಟ್ರಸ್ಟ್‌ಯಡಿ ನೋಂದಾಯಿಸಿಕೊಂಡ ಸಂಸ್ಥೆಯ ಮೂಲಕ ಅರ್ಜಿಯನ್ನು ಸಲ್ಲಿಸಬೇಕಾಗಿರುತ್ತದೆ.
6. ಅರ್ಜಿಯನ್ನು ಆಂಗ್ಲ ಭಾಷೆಯಲ್ಲಿ ನಿಗದಿತ ನಮೂನೆಯಲ್ಲಿ ಆನ್‌ಲೈನ್ ಮೂಲಕ ಸಲ್ಲಿಸುವುದು.
7. ಅಂಗವಿಕಲರ ಅಧಿನಿಯಮದಲ್ಲಿ ಸೂಚಿಸಿರುವ ಹಾಗೂ ವೈದ್ಯಕೀಯ ಪ್ರಾಧಿಕಾರದವರು ಶಿಫಾರಸ್ಸು ಮಾಡಿರುವ ವೈದ್ಯಕೀಯ ಪ್ರಮಾಣವನ್ನು ಸಲ್ಲಿಸಬೇಕಾಗಿರುತ್ತದೆ.
8. ಈ ಯೋಜನೆಯಡಿ ಸೌಲಭ್ಯ ಪಡೆಯುವ ವಿಕಲಚೇತನ ವ್ಯಕ್ತಿಗೆ ವಾರ್ಷಿಕ ರೂ.250/-ಗಳ ವಿಮಾ ಮೊತ್ತವನ್ನು ಒಂದು ಬಾರಿಗೆ ಸರ್ಕಾರವೇ ಪಾವತಿ ಮಾಡುವುದು. ಪ್ರತಿ ವರ್ಷ ಫಲಾನುಭವಿಗಳು ಯೋಜನೆಯಡಿ ತಮ್ಮ ನೋಂದಣಿಯನ್ನು ಕಡ್ಡಾಯವಾಗಿ ನವೀಕರಿಸಿಕೊಳ್ಳತಕ್ಕದ್ದು. ನವೀಕರಣಕ್ಕೆ ಯಾವುದೇ ಹಣ ಪಾವತಿಸಬೇಕಾಗಿರುವುದಿಲ್ಲ.
9. ಈ ಯೋಜನೆಯಡಿ ಬಡತನ ರೇಖೆಗಿಂತ ಕೆಳಗಿರುವ ವಿಕಲಚೇತನ ವ್ಯಕ್ತಿಗಳಿಗೆ ಪ್ರತೀ ವರ್ಷ ಗರಿಷ್ಠ ರೂ.1.00 ಲಕ್ಷದವರೆಗೆ ನಿರಂತರ ವೈದ್ಯಕೀಯ ತಪಾಸಣೆಗೆ, ಹಾಸ್ಪಟಲೈಜೇಷನ್, ಥೆರಪಿ ಪಡೆಯಲು, ನಿವಾರಣಾ ಶಸ್ತ್ರ ಚಿಕಿತ್ಸೆಗೆ ಹಾಗೂ ಸಾರಿಗೆ ವೆಚ್ಚಗಳಿಗಾಗಿ ನ್ಯಾಷನಲ್ ಟ್ರಸ್ಟ್ ಅಧಿನಿಯಮದವರು ನಿಗದಿ ಪಡಿಸಿರುವ ಮೊತ್ತದ ಮಿತಿಯೊಳಗೆ ವೈದ್ಯಕೀಯ ಶುಶ್ರೂಷೆ ಪಡೆದ ನಂತರ ಮಾತ್ರ ವೈದ್ಯಕೀಯ ವೆಚ್ಚ ಮರುಪಾವತಿ ಪಡೆಯಲು ಅವಕಾಶವಿದೆ.
10. ಈ ಯೋಜನೆಯನ್ನು ನ್ಯಾಷನಲ್ ಟ್ರಸ್ಟ್ ಆಯ್ಕೆ ಮಾಡಿದ ಹಾಲಿ ಇರುವ ಐ.ಸಿ.ಐ.ಸಿ.ಐ ಲಂಬಾರ್ಡ್ ಮೂಲಕ ಅನುಷ್ಠಾನಗೊಳಿಸಲಾಗುವುದು.
11. ಅರ್ಜಿದಾರರು ನಿರಾಮಯ ಯೋಜನೆಯಡಿ ವೈದ್ಯಕೀಯ ವೆಚ್ಚಗಳ ಮರುಪಾವತಿಗಾಗಿ ಐ.ಸಿ.ಐ.ಸಿ.ಐ ಲಂಬಾರ್ಡ್ ಸಂಸ್ಥೆಗೆ ಸಂಬಂಧಿಸಿದ ರಸೀದಿಗಳು/ ಬಿಲ್ ಮುಂತಾದವುಗಳನ್ನು ಚಿಕಿತ್ಸೆ ಪಡೆದ/ ಆಸ್ಪತ್ರೆಯಿಂದ ಬಿಡುಗಡೆಗೊಂಡ 30 ದಿನಗಳೊಳಗಾಗಿ ವಿವರಗಳೊಂದಿಗೆ ಸಲ್ಲಿಸುವುದು.

21/8/14

(ಗೋಪಾಲ್)
ಸರ್ಕಾರದ ಉಪ ಕಾರ್ಯದರ್ಶಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
ಹಾಗೂ ವಿಕಲಚೇತನರ ಮತ್ತು ಹಿರಿಯ
ನಾಗರಿಕರ ಸಬಲೀಕರಣ ಇಲಾಖೆ.